ಅಂಚೇ ಇಲಾಖಾ.

ನಂ. 74—39. ತಾರೀಖು 4ನೇ ಮೇ 1887.

ಇದರಿಂದ ಸಕಲ ಜನಗಳಿಗೂ ತಿಳಿಯುವ ಬ್ಯಾಗ್ಯೆ ಪ್ರಕಟಿಸಲ್ಪಡುವದೇನಂದರೆ; ಮೈಸೂರು ಶ್ರೀಮತ್ ಮಹಾರಾಜ ರಾಜಾಸಾಹೇಬ್ ಬಹದೂರವರ ಅಪ್ಪಣೆ ಅನುಸರಿಸಿ ಗುಬ್ಬೀ ತಾಲ್ಲೂಕು ದಂಡಿನ ಸವರದಲ್ಲಿ ಅಂಚೇ ಆಫೀಸ್ ಸ್ಥಾಪಿಸಲ್ಪಟ್ಟಿರುತ್ತೆ.

ಬಿ. ಮರಿಗಂಗಯ್ಯ,
ಅಂಚೇ ಬಕ್ಷಿ.

ಮೈಸೂರು ಡಿಸ್ಟ್ರಿಕ್ಟ್ ಜಡ್ಜ್‌ರವರ ಕೋರ್ಟ್‌ನಲ್ಲಿ.

1887ನೇ ಇಸವಿ ಅರ್ಜೀ ನಂಬರ್ 176.

ಮೃತಪಟ್ಟ ನಂಜಮ್ಮ ವುರಫ್ ಲಿಂಗಮ್ಮನವರ ಆಸ್ತಿ ವಿಷಯದಲ್ಲಿ—

ಅರ್ಜೀದಾರಳು ಮಾದಮ್ಮನವರು, ಮೃತಪಟ್ಟ ಸದರೀ ನಂಜಮ್ಮವುರಫ್ ಲಿಂಗಮ್ಮನವರಿಗೆ ಸೊಸೆ ಆಗಬೇಕೆಂಬ ಹಕ್ಕುದಾರೀ ಮೇಲೆ ಮೈಸೂರು ಹಳೆ ಅಗ್ರಹಾರದ ಸ್ಥಳದ ಸದರೀ ಮಾದಮ್ಮನವರು ಸದರೀ ವಾಸಸ್ಥರಾಗಿ ಮೃತಪಟ್ಟ ನಂಜಮ್ಮ ವುರಫ್ ಲಿಂಗಮ್ಮನವರ ಜಿಂದಗಿ-ಬಗ್ಯಾಗಿ ಬರತಕ್ಕ 300 ರೂಪಾಯಿ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರಟಿಫಿಕೇಟ್ ಬ್ಯಾಗ್ಯೆ ಈ ಕೋರ್ಟ್‌ಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಮಾದಮ್ಮನವರ ಅರ್ಜೀಯನ್ನು 1887ನೇ ಇಸವಿ ಜೂನ್ ತಿಂಗಳು ತಾರೀಖು 14ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ನಂಜಮ್ಮ ವುರಫ್ ಲಿಂಗಮ್ಮನವರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟ್‌ನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಅರ್ಜೀ ನಂಬರ್ 207.

ಮೃತಪಟ್ಟ ಬೋರೆಗೌಡರ ಆಸ್ತಿ ವಿಷಯದಲ್ಲಿ—

ಅರ್ಜೀದಾರ ಜೋಗಿಗೌಡರು, ಮೃತಪಟ್ಟ ಸದರೀ ಬೋರೆಗೌಡರಿಗೆ ಮಗ ಆಗಬೇಕೆಂಬ ಹಕ್ಕುದಾರಿ ಮೇಲೆ ಮೈಸೂರು ತಾಲ್ಲೂಕು ಜಟ್ಟಿಹುಂಡಿ ಸ್ಥಳದ ಸದರೀ ಜೋಗಿಗೌಡರು ಸದರೀ ವಾಸಸ್ಥರಾಗಿ ಮೃತಪಟ್ಟ ಬೋರೆಗೌಡರ ಜಿಂದಗಿ ಬಗ್ಯಾಗಿ ಬರತಕ್ಕ 600 ರೂಪಾಯಿ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರ್ಟಿಫಿಕೇಟ್ ಬ್ಯಾಗ್ಯೆ ಈ ಕೋರ್ಟ್‌ಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಜೋಗಿಗೌಡರ ಅರ್ಜಿಯನ್ನು 1887ನೇ ಇಸವಿ ಜೂನ್ ತಿಂಗಳು ತಾರೀಖು 30ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಬೋರೆಗೌಡರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟ್‌ನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಅರ್ಜೀ ನಂಬರ್ 211.

ಮೃತಪಟ್ಟ ವಿನಾಕ್ಷಮ್ಮನವರ ಆಸ್ತಿ ವಿಷಯದಲ್ಲಿ—

ಅರ್ಜೀದಾರ ವೆಂಕಟಾಚಲಶಾಸ್ತ್ರಿಗಳು ಮೃತಪಟ್ಟ ಸದರೀ ವಿನಾಕ್ಷಮ್ಮನವರಿಗೆ ಸಹೋದರ ಆಗಬೇಕೆಂಬ ಹಕ್ಕುದಾರಿ ಮೇಲೆ ಮೈಸೂರು ಶ್ರೀರಾಂಪೇಟೆ ಸ್ಥಳದ ಸದರೀ ವೆಂಕಟಾಚಲಶಾಸ್ತ್ರಿಗಳು ಕಸಬು ತಿರುಮಕೂಡ್ಲು ವಾಸಸ್ಥರಾಗಿ ಮೃತಪಟ್ಟ ವಿನಾಕ್ಷಮ್ಮನವರ ಜಿಂದಗಿ ಬಗ್ಯಾಗಿ ಬರತಕ್ಕ 30 ರೂಪಾಯಿ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರ್ಟಿಫಿಕೇಟ್ ಬ್ಯಾಗ್ಯೆ ಈ ಕೋರ್ಟ್‌ಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ವೆಂಕಟಾಚಲಶಾಸ್ತ್ರಿಗಳ ಅರ್ಜಿಯನ್ನು 1887ನೇ ಇಸವಿ ಜೂನ್ ತಿಂಗಳು ತಾರೀಖು 30ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ವಿನಾಕ್ಷಮ್ಮನವರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟ್‌ನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಏಪ್ರೆಲ್ ತಿಂಗಳು 22ನೇ ತಾರೀಖಿನಲ್ಲಿ ಕೋರ್ಟು ಮೊಹರಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಎಸ್. ಹೇಮಾಜಿರಾವ್,
ಡಿಸ್ಟ್ರಿಕ್ಟ್ ಜಡ್ಜ್.